ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯ ವೈಖರಿ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

993 (1183) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹೆಸರಿನಲ್ಲಿ ಎಷ್ಟು ಆಸ್ತಿ ಇರುತ್ತದೆ; ಇವುಗಳನ್ನು ಶಾಲೆಗಳ ಹೆಸರಿನಲ್ಲಿ ನೋಂದಾಯಿಸದೆ ಇರಲು ಕಾರಣವೇನು; (ಪ್ರತ್ಯೇಕವಾಗಿ ಶಾಲೆಗಳ ವಿವರ ನೀಡವುದು)

(ಆ) ಕಳೆದ 3 ಆರ್ಥಿಕ ವರ್ಷದಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದಲ್ಲಿ ಲೆಕ್ಕ ಪತ್ರಗಳಿಗೆ ಸಂಬಂಧಿಸಿದಂತೆ ಅಡಿಟ್ ಆಗಿದೆಯೇ; ಆಗಿದ್ದಲ್ಲಿ, ಆಕ್ಷೇಪಣೆಗಳು ಇದೆಯೇ; ಇದ್ದರೆ ಅದರ ಮೇಲೆ ಏನು ಕ್ರಮ ಆಗಿದೆ; (ಆಡಿಟ್ ವರದಿ ಪ್ರತಿಯನ್ನು ನೀಡುವುದು)

(ಇ) ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದಲ್ಲಿ ಶಿಕ್ಷಕೇತರ ಸಿಬ್ಬಂದಿ ಎಷ್ಟು; ಇವರು ಎಷ್ಟು ವರ್ಷಗಳಿಂದ ಇಲ್ಲಿ ಕಾರ್ಯ ಮಾಡುತ್ತಿದ್ದಾರೆ, ಇವರಲ್ಲಿ ಇದೆ ತಾಲ್ಲೂಕಿನ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ 3 ವರ್ಷದ ಅವಧಿಯಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡಿದ/ಮಾಡುತ್ತಿರುವ ಸರ್ಕಾರಿ ಶಾಲೆಯ ಮಕ್ಕಳ ಸಂಖ್ಯೆ ಎಷ್ಟು; ಇವರಿಗೆ ಎಷ್ಟು ಶೂ ಮತ್ತು ಸಾಕ್ಸ್ ಖರೀದಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಉ) ಕಳೆದ 3 ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಈ ತಾಲ್ಲೂಕಿನ ಎಷ್ಟು ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿರುತ್ತಾರೆ? (ವಿವರ ನೀಡುವುದು)